ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ
4ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು – 560 041
RAJIV GANDHI UNIVERSITY OF HEALTH SCIENCES, KARNATAKA
4th 'T' Block, Jayanagar, Bengaluru - 560 041
Phone : 080-26961934, 080 - 2696 1935, Fax : 080 - 2696 1929
Website : www.rguhs.ac.in, E-mail : registrar@rguhs.ac.in

Ref. : ಆರ್‌ಜಿಯು/ಎ.ಡಿ.ಎಂ (ನ)/ಸೀಟ್ ಮ್ಯಾಟ್ರಿಕ್ಸ್/70/2020-21 Date : 29/03/2021

ಇವರಿಗೆ,

ಪ್ರಾಂಶುಪಾಲರು
ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಂಡಿರುವ
ಎಲ್ಲಾ ನರ್ಸಿಂಗ್ ಮತ್ತು ಅಲೈಡ್ ಹೆಲ್ತ್ ಸೈನ್ಸ್ ಕಾಲೇಜುಗಳು.

ಮಾನ್ಯರೆ,

ವಿಷಯ: 2020-21 ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಬಿ.ಎಸ್ಸಿ.(ನ), ಪಿ.ಬಿ. ಬಿ.ಎಸ್ಸಿ.(ನ) ಮತ್ತು ಅಲೈಡ್ ಹೆಲ್ತ್ ಸೈನ್ಸ್ ಕೋರ್ಸುಗಳಿಗೆ ಖಾಸಗಿ ಸಂಸ್ಥೆಗಳಲ್ಲಿ ಸರ್ಕಾರಿ ಕೋಟಾದಡಿ ಆಯ್ಕೆಯಾಗಿರುವ ವಿದ್ಯಾರ್ಥಿಗಳಿಗೆ ಸರ್ಕಾರ ನಿಗದಿಪಡಿಸಿರುವ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡುತ್ತಿರುವುದು ಹಾಗೂ ಸರ್ಕಾರಿ ಕೋಟಾದಡಿ ಆಯ್ಕೆಯಾಗಿರುವ ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ಕೆಲವು ಕಾಲೇಜಿನ ಆಡಳಿತ ಮಂಡಳಿಯವರು / ಪ್ರಾಂಶುಪಾಲರು ನಿರಾಕರಿಸುತ್ತಿರುವ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಈ ಮೂಲಕ ತಿಳಿಸುವುದೇನೆಂದರೆ 2020-21ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಬಿ.ಎಸ್ಸಿ.(ನ), ಪಿ.ಬಿ. ಬಿ.ಎಸ್ಸಿ.(ನ) ಮತ್ತು ಅಲೈಡ್ ಹೆಲ್ತ್ ಸೈನ್ಸ್ ಕೋರ್ಸುಗಳಿಗೆ ಖಾಸಗಿ ಸಂಸ್ಥೆಗಳಲ್ಲಿ ಸರ್ಕಾರಿ ಕೋಟಾದಡಿ ಆಯ್ಕೆಯಾಗಿರುವ ವಿದ್ಯಾರ್ಥಿಗಳಿಗೆ ಕೆಲವು ಕಾಲೇಜಿನ ಆಡಳಿತ ಮಂಡಳಿಯವರು ಸರ್ಕಾರ ನಿಗದಿಪಡಿಸಿರುವ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡುತ್ತಿರುವುದು, ಸದರಿ ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ನಿರಾಕರಿಸುತ್ತಿರುವುದು ಹಾಗೂ ಸರ್ಕಾರದ / ವಿಶ್ವವಿದ್ಯಾಲಯದ ಆದೇಶವಿಲ್ಲದಿದ್ದರೂ ಕೇವಲ ವಿದ್ಯಾರ್ಥಿನಿಯರಿಗೆ ಮಾತ್ರ ಪ್ರವೇಶಾತಿ ನೀಡುತ್ತಿರುವುದು ಮಾನ್ಯ ಕುಲಪತಿಯವರ ಗಮನಕ್ಕೆ ಬಂದಿರುತ್ತದೆ. ಮಾನ್ಯ ಕುಲಪತಿಯವರು ಸದರಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿರುತ್ತಾರೆ.

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಎಲ್ಲಾ ಕಾಲೇಜುಗಳ ಆಡಳಿತ ಮಂಡಳಿ / ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, ಸರ್ಕಾರಿ ಕೋಟಾದಡಿ ಆಯ್ಕೆಯಾಗಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಸಂಬಂಧಪಟ್ಟ ಕಾಲೇಜುಗಳಲ್ಲಿ ಪ್ರವೇಶಾತಿಯನ್ನು ನೀಡುವುದು ಹಾಗೂ ಸರ್ಕಾರ ನಿಗದಿಪಡಿಸಿರುವ ಶುಲ್ಕವನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯಲು ಈ ಮೂಲಕ ಸೂಚಿಸಲಾಗಿದೆ. ಈ ಆದೇಶ ಉಲ್ಲಂಘಿಸಿದ್ದಲ್ಲಿ **"2021-22 ನೇ ಸಾಲಿಗೆ ಸದರಿ ಸಂಸ್ಥೆಗಳಿಗೆ ಮುಂದುವರೆದ ಸಂಯೋಜನೆಯನ್ನು ನೀಡಲಾಗುವುದಿಲ್ಲ ಹಾಗೂ ಆಡಳಿತ ಮಂಡಳಿಯಿಂದ 2020-21 ನೇ ಸಾಲಿಗೆ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳ ಅನುಮೋದನೆಯನ್ನು ತಡೆಯಿಡಿಯಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ".**

ಕುಲಸಚಿವರು
ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯ
ಬೆಂಗಳೂರು.

ಪ್ರತಿಗಳು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, (ವೈದ್ಯಕೀಯ ಶಿಕ್ಷಣ), ಬೆಂಗಳೂರು.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, ಆನಂದರಾವ್ ವೃತ್ತ, ಬೆಂಗಳೂರು – 560009.
3. ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಮಲ್ಲೇಶ್ವರಂ, ಬೆಂಗಳೂರು.